ವಿನಾಯಿತಿ ನೀಡಿರುವ ಸಂಬಂಧದಲ್ಲಿ ದಿನಾಂಕ 3.10.2001ರಂದು ಹೊರಡಿಸಲಾದ ಒಸಾಇ:23:ಟಿಎಂಟಿ:98ನೇ ಸಂಖ್ಯೆಯ ಅಧಿಸೂಚನೆ;

14. ಶ್ರೀ ಮಾಚಾ ಅಮೃತಾನಂದಮಯಿ ಮಠ ಇವರು ಹೊಂದಿರುವ 7 ಬಸ್ಸು ಒಂದು ಟ್ರಕ್ ಹಾಗೂ 1 ಸ್ವರಾಜ್ ಮಜದಾ ಒಟ್ಟು 9 ವಾಹನಗಳಿಗೆ ಕರ್ನಾಟಕದಲ್ಲಿ ಪ್ರವಾಸ ಮಾಡುವ ಸಮಯದಲ್ಲಿ ಕರ್ನಾಟಕ ಮೋಟಾರು ವಾಹನ ತೆರಿಗೆಯಿಂದ ವಿನಾಯಿತಿ ನೀಡಿ ದಿನಾಂಕ 25.2.2002ರಂದು ಹೊರಡಿಸಲಾದ ಒಸಾಇ:10:ಟಿಎಂಟಿ:2002ನೇ ಸಂಖ್ಯೆಯ ಅಧಿಸೂಚನೆಗಳನ್ನು ಸಭೆಯ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

III. ಪ್ರೊ. ಬಿ.ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

1983ರ ಮಾನ್ಯ ಅಧ್ಯಕ್ಷರೆ ಕರ್ನಾಟಕ ಶಿಕ್ಷಣ ಅಧಿನಿಯಮ (1995ರ ಕರ್ನಾಟಕ ಅಧಿನಿಯಮ-1)

145(4)ರ ಪ್ರಕರಣದ ಮೇರೆಗೆ:

ಕರ್ನಾಟಕ ಟುಟೋರಿಯಲ್ ಸಂಸ್ಥೆಗಳು (ನೋಂದಣಿ ಮತ್ತು ನಿಬಂಧನೆ) ನಿಯಮಗಳು 2001ನ್ನು ರಚಿಸಿರುವ ಸಂಬಂಧದಲ್ಲಿ ದಿನಾಂಕ 5.3.2002ರಂದು ಹೊರಡಿಸಲಾದ ಇಡಿ:43:ವಿವಿಧ:2000ನೇ ಸಂಖ್ಯೆಯ ಅಧಿಸೂಚನೆಯನ್ನು ಸಭೆಯ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

3. ಶಾಸನ ರಚನೆ

ವಿಧೇಯಕಗಳ ಮಂಡನೆ

i) ಕರ್ನಾಟಕ ಬಿಕ್ಷಾಟನೆ ನಿಷೇಧ (ತಿದ್ದುಪಡಿ) ವಿಧೇಯಕ, 2002ರ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) : ಮಾನ್ಯ ಅಧ್ಯಕ್ಷರೆ 2002ರ ಕರ್ನಾಟಕ ಭಿಕ್ಷಾಟನೆ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತಿದ್ದೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2002ರ ಕರ್ನಾಟಕ ಭಿಕ್ಷಾಟನೆ ನಿಷೇಧ (ತಿದ್ದುಪಡಿ) ವಿಧೇಯಕನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎ.ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) : ಮಾನ್ಯ ಅಧ್ಯಕ್ಷರೆ, 2002ರ ಕರ್ನಾಟಕ ಬಿಕ್ಷಾಟನೆ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಅನುಬಂಧ IV ವಿಧೇಯಕವನ್ನು ಮಂಡಿಸಲಾಗಿದೆ.

ii) ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2002ರ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ ಸಚಿವರು) : ಮಾನ್ಯ ಅಧ್ಯಕ್ಷರೆ, "2002ರ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತಿದ್ದೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2002ರ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಖಮರಲ್ ಇಸ್ಲಾಂ (ಕಾರ್ಮಿಕ ಸಚಿವರು) : ಮಾನ್ಯ ಅಧ್ಯಕ್ಷರೆ, "2002ರ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ಅನುಬಂಧ V ವಿಧೇಯಕವನ್ನು ಮಂಡಿಸಲಾಗಿದೆ.

iii) ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) (ತಿದ್ದುಪಡಿ) ವಿಧೇಯಕ, 2002ರ ಮಂಡನೆಗೆ ಅನುಮತಿ ಕೋರಿಕೆ.

ಡಾ|| ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, "2002ರ ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2002ರ ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) (ತಿದ್ದುಪಡಿ) ವಿಧೇಯಕನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಡಾ|| ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, "2002ರ ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಷನ್ ಶುಲ್ಕ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತಿದ್ದೇನೆ."

ಅಧ್ಯಕ್ಷರು : ಅನುಬಂಧ VI ವಿಧೇಯಕವನ್ನು ಮಂಡಿಸಲಾಗಿದೆ.